550

# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 263 (293) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 18.07.2024 |
| ಉತ್ತರಿಸುವವರು | : | ಮಾನ್ಯ ಮುಖ್ಯಮಂತ್ರಿಗಳು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಎನ್.ಪಿ.ಎಸ್. ರದ್ದುಪಡಿಸಿ ಓ.ಪಿ.ಎಸ್. ಜಾರಿಗೆ ತರುವುದಾಗಿ ಸರ್ಕಾರವು ಚುನಾವಣಾ ಪೂರ್ವ ಪ್ರಣಾಳಿಕೆಯಲ್ಲಿ ಘೋಷಣೆ ಮಾಡಿರುವುದು ನಿಜವೇ; ನಿಜವಿದ್ದಲ್ಲಿ, ಪ್ರಣಾಳಿಕೆಯನ್ವಯ ಯಾವಾಗ ಜಾರಿಗೊಳಿಸಲಾಗುವುದು; (ಸಂಪೂರ್ಣ ಮಾಹಿತಿ ನೀಡುವುದು) | ಹಳೆಯ ಪಿಂಚಣಿ ಯೋಜನೆಯ ಆರ್ಥಿಕ ಹೊರೆಯನ್ನು ನಿಭಾಯಿಸಲು ಸಾಕಷ್ಟು ನಿಧಿಯ ಆಧಾರ ಇಲ್ಲದಿರುವುದರಿಂದ ಹಾಗೂ ರಿಸರ್ವ್ ಬ್ಯಾಂಕ್ ರವರು ರಚಿಸಿದ ಸಮಿತಿಯ ವರದಿಯ ಶಿಫಾರಸ್ಸಿನ ಆಧಾರದ ಮೇಲೆ ಕೇಂದ್ರ ಸರ್ಕಾರವು ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ದಿನಾಂಕ:01.01.2004 ರಿಂದ ಜಾರಿಗೊಳಿಸಿರುತ್ತದೆ. ಅದರಂತೆಯೇ ಇತರೆ ರಾಜ್ಯಗಳು ಈ ಯೋಜನೆಯನ್ನು ಅಳವಡಿಸಿಕೊಂಡ ಹಿನ್ನೆಲೆಯಲ್ಲಿ, ಕರ್ನಾಟಕ ರಾಜ್ಯವು ಕೂಡ ಸರ್ಕಾರದ ಆದೇಶ ಸಂಖ್ಯೆ: ಆಇ (ಎಸ್.ಪಿ.ಎಲ್.) 04 ಪಿಇಟಿ 2005, ದಿನಾಂಕ:31.03.2006 ರನ್ವಯ ದಿನಾಂಕ:01.04.2006 ರಂದು ಮತ್ತು ತದನಂತರ ಸರ್ಕಾರಿ ಸೇವೆಗೆ ಸೇರುವ ನೌಕರರಿಗೆ ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ಜಾರಿಗೊಳಿಸಿರುತ್ತದೆ.<br><br>ಸರ್ಕಾರದ ಆದೇಶ ಸಂಖ್ಯೆ: ಆಇ-ಪಿಇಎನ್/89/2023, ದಿನಾಂಕ: 01.03.2023ರಲ್ಲಿ ಈಗಾಗಲೇ ಹಳೆ ಪಿಂಚಣಿ ಯೋಜನೆಯನ್ನು ಮರು ಜಾರಿ ಮಾಡಿರುವ ರಾಜ್ಯಗಳಲ್ಲಿ ಈ ಯೋಜನೆಯನ್ನು ಅನುಷ್ಠಾನಗೊಳಿಸಿರುವ ಕುರಿತು ಕೈಗೊಂಡಿರುವ ಕ್ರಮಗಳ ಬಗ್ಗೆ ಅಧ್ಯಯನ ನಡೆಸಿ ವರದಿ ಸಲ್ಲಿಸಲು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಿ ಆದೇಶಿಸಿದೆ.<br><br>ಸಮಿತಿಯ ವರದಿಯನ್ನು ನಿರೀಕ್ಷಿಸಲಾಗಿದೆ. |
| ಆ | ಓ.ಪಿ.ಎಸ್. ತಕ್ಷಣದಿಂದ ಜಾರಿಗೆ ತರಲು ಸರ್ಕಾರಕ್ಕೆ ಇರುವ ಅಡಚಣೆಗಳೇನು; ಇಲ್ಲಿಯವರೆಗೆ ಜಾರಿಗೊಳಿಸದಿರಲು ಕಾರಣಗಳೇನು; (ಸಂಪೂರ್ಣ ಮಾಹಿತಿ ನೀಡುವುದು) | |
| ಇ | ಓ.ಪಿ.ಎಸ್. ಜಾರಿಗೊಳಿಸುವ ನಿಟ್ಟಿನಲ್ಲಿ ಸರ್ಕಾರವು ಕೈಗೊಂಡ ಕ್ರಮಗಳೇನು; (ವಿವರ ನೀಡುವುದು) | |
| ಈ | ಎನ್.ಪಿ.ಎಸ್. ನಿಂದ ಓ.ಪಿ.ಎಸ್.ಗೆ ಜಾರಿಗೊಳಿಸುವ ನಿಟ್ಟಿನಲ್ಲಿ ಸಮಿತಿ ರಚನೆ ಮಾಡಿರುವುದು ನಿಜವೇ; ಸಮತಿ ರಚನೆ ಮಾಡಿದ್ದಲ್ಲಿ, ಯಾವ ದಿನಾಂಕದಿಂದ ಮತ್ತು ಯಾವ ಯಾವ ಸದಸ್ಯರನ್ನೂ ಈ ಸಮಿತಿಗೆ ನೇಮಕ ಮಾಡಲಾಗಿದೆ; (ಮಾಹಿತಿ ಮತ್ತು ಆದೇಶ ಪ್ರತಿ ನೀಡುವುದು) | |
| ಉ | ಸದರಿ ಸಮಿತಿಯು ತನ್ನ ಕಾರ್ಯವನ್ನು ಕೈಗೊಂಡಿದೆಯೇ; ಕೈಗೊಂಡಿದ್ದಲ್ಲಿ, ಪ್ರಸ್ತುತ ಸಮಿತಿಯು ಕೈಗೊಂಡ ಕ್ರಮಗಳೇನು, ಸದರಿ ಸಮಿತಿಗೆ ವರದಿಯನ್ನು ನೀಡುವಂತೆ ಕಾಲಮಿತಿ ನೀಡಲಾಗಿದೆಯೇ? | |

ಸಂಖ್ಯೆ: ಆಇ-ಪಿಇಎನ್/208/2024

(ಸಿದ್ದರಾಮಯ್ಯ)
ಮುಖ್ಯಮಂತ್ರಿ